ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 997
ಸದಸ್ಯರ ಹೆಸರು : ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮ ನಿರ್ದೇಶನ ಹೊಂದಿದವರು)
ಉತ್ತರಿಸುವ ದಿನಾಂಕ : 21–12–2021
ಉತ್ತರಿಸುವ ಸಚಿವರು : ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.

ಕ್ರ.ಸಂ	ಪ್ರಶ್ನೆ	ಉತ್ತರ
ಅ	ರಾಮನಗರ ಜಿಲ್ಲೆ, ಮಾಗಡಿ ತಾಲ್ಲೂಕು, ಮಾಗಡಿಯಲ್ಲಿ ಅಂಗನವಾಡಿ ಕಾರ್ಯಕರ್ತೆಯರು ನಿವೃತ್ತಿ ಹೊಂದಿ ಮೂರು ವರ್ಷಗಳು ಕಳೆದರು ಇಲ್ಲಿಯವರೆಗೂ ಸದರಿ ಅಂಗನವಾಡಿ ಕಾರ್ಯಕರ್ತೆಯರಿಗೆ ನಿವೃತ್ತಿ ವೇತನ ಬಿಡುಗಡೆಗೊಳಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮವೇನು? (ವಿವರ ನೀಡುವುದು)	ಎನ್.ಪಿ.ಎಸ್. ಲೈಟ್ ಯೋಜನೆಯಡಿ ನೊಂದಣಿಯಾದ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರು ನಿವೃತ್ತಿ ಹೊಂದಿದ ನಂತರ ಅವರ ಖಾತೆಯಲ್ಲಿರುವ ಮೊತ್ತವನ್ನು ಪಾವತಿಸಲಾಗುತ್ತಿದೆ. ಮಾಗಡಿ ತಾಲ್ಲೂಕಿನಲ್ಲಿ ಬಾಕಿಯಿರುವ ಪ್ರಕರಣಗಳು ಈ ಕೆಳಕಂಡಂತಿದೆ. (ಕೆಳಗಿನ ಕೋಷ್ಟಕ) ರಾಜ್ಯ ಮಟ್ಟದಲ್ಲಿ ನಿವೃತ್ತಿ ಪ್ರಕರಣಗಳನ್ನು ಆನ್‌ಲೈನ್ ಮುಖಾಂತರ ಮಂಜೂರಾತಿ ಮಾಡಲು ತಡವಾಗುತ್ತಿದ್ದರಿಂದ ಜಿಲ್ಲಾ ಹಂತದಲ್ಲಿಯೇ ಮಂಜೂರಾತಿ ಮಾಡಲು ಅವಕಾಶ ಕಲ್ಪಿಸಲಾಗಿದೆ. ಪ್ರಸ್ತುತ 21 ಪ್ರಕರಣಗಳ ನಿವೃತ್ತಿ ವೇತನ ಪ್ರಕ್ರಿಯೆ ನಡೆಸುತ್ತಿದ್ದು, ಆದಷ್ಟು ಬೇಗ ಕ್ರಮ ಕೈಗೊಳ್ಳಲಾಗುವುದು.

ಕ್ರ. ಸಂ.	ಹುದ್ದೆಯ ವಿವರ	ಬಾಕಿಯಿರುವ ಪ್ರಕರಣಗಳ ಸಂಖ್ಯೆ		
		2018–19	2019–20	2020–21
1	**ಅಂಗನವಾಡಿ ಕಾರ್ಯಕರ್ತೆ**	0	07	02
2	**ಅಂಗನವಾಡಿ ಸಹಾಯಕಿ**	0	08	04
	ಒಟ್ಟು	**0**	**15**	**06**

ಸಂ: ಮಮಇ 317 ಐಸಿಡಿ 2021

Halappa

(ಆಚಾರ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವರು.